ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:16/50:ಆರ್‌ಆರ್‌ಸಿ:2014.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:23-7-2014.

## ಅಧಿಸೂಚನೆ

ವಿಷಯ: ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಯಪಾಲಕ ಅಭಿಯಂತರರುಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಯನ್ನು ಪುನರಾವಲೋಕನ ಮಾಡಲು ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆಆರ್‌ಆರ್‌ಡಿಎ ರವರಿಗೆ ಕಳುಹಿಸುವ ಕುರಿತು.

ಜಿಲ್ಲಾ ಮಟ್ಟದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಯಪಾಲಕ ಅಭಿಯಂತರರುಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಯಲ್ಲಿ ಭಾಗ-3ರಲ್ಲಿ ವರದಿ ಮಾಡುವ ಪ್ರಾಧಿಕಾರಿಯಾಗಿ ಈ ಹಿಂದೆ ಅಧೀಕ್ಷಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಇದ್ದಂತಹ ಅಧಿಕಾರವನ್ನು ಬದಲಾಯಿಸಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಲಾಗಿರುತ್ತದೆ.

ಆದರೆ ವಾರ್ಷಿಕ ಕಾರ್ಯನಿರ್ವಹಣಾ ವರದಿಯ ಭಾಗ-4ರಲ್ಲಿ ಪುನರಾವಲೋಕನ ಮಾಡುವ ಪ್ರಾಧಿಕಾರವನ್ನು ಗುರುತಿಸದೇ ಇರುವುದರಿಂದ ಬಹಳಷ್ಟು ಅಧಿಕಾರಿಗಳು ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರನ್ನು ಪ್ರಾಧಿಕಾರವನ್ನಾಗಿ ಗುರುತಿಸುವ ಸಂಬಂಧ ಸರ್ಕಾರಕ್ಕೆ ವಿಚಾರಣೆ ಮಾಡುತ್ತಿದ್ದು, ಈ ವಿಷಯದಲ್ಲಿ ಅಸ್ಪಷ್ಟತೆ ಉಂಟಾಗಿರುತ್ತದೆ.

ಆದುದರಿಂದ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಯಪಾಲಕ ಅಭಿಯಂತರರುಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳಲ್ಲಿ ಭಾಗ-4ರ ಪುನರಾವಲೋಕನ ಮಾಡಲು ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆಆರ್‌ಆರ್‌ಡಿಎ ರವರನ್ನು ಪುನರಾವಲೋಕನ ಮಾಡುವ ಪ್ರಾಧಿಕಾರಿಯನ್ನಾಗಿ ಮಾಡಲಾಗಿದೆ.

ಇನ್ನು ಮುಂದೆ 2013-14ನೇ ಸಾಲಿನಿಂದ ಕಾರ್ಯಪಾಲಕ ಅಭಿಯಂತರರುಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳಲ್ಲಿ ಭಾಗ-4ರ ಪುನರಾವಲೋಕನ ಮಾಡುವ ಪ್ರಾಧಿಕಾರದ ಷರಾಗಳನ್ನು ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆಆರ್‌ಆರ್‌ಡಿಎ ರವರು ನಮೂದಿಸಿ ಅಂಗೀಕಾರ ಪ್ರಾಧಿಕಾರವಾದ ಸರ್ಕಾರದ ಕಾರ್ಯದರ್ಶಿಗಳು-1/ಪ್ರಧಾನ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು.

23/7/14

(ಬೂವನಹಳ್ಳಿನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,ಬೆಂಗಳೂರು.

3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
4. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
6. ಎಲ್ಲಾ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
7. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
8. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
9. ಮಾಹಿತಿ ಕೇಂದಕ್ಕೆ (10 ಪತಿಗಳು).
10. ರಕ್ಷಾ ಕಡತ / ಹೆಚ್ಚುವರಿ ಪ್ರತಿ.